Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/48/2022-23

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ-ವಿಭಾಗ, ಪೂರ್ವ ವಲಯ
ವಿ. ನಾಗೇನಹಳ್ಳಿ, ವಾರ್ಡ್ ನಂ;22
ಬೆಂಗಳೂರು – 560032.
ದಿನಾಂಕ: 28-04-2022

**ದಿನಾಂಕ; 28-04-2022 ರಂದು ವಾರ್ಡ್ ಸಮಿತಿ ಸಭೆಯ ನಡವಳಿಗಳು;-**

- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ರವರು
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ ನಿರ್ವಹಣೆ
- ಶ್ರೀ. ಮುನಿರಾಮಣ್ಣ, ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀಮತಿ. ಉಷಾರಾಣಿ, ಸಮಾಜ ಕಲ್ಯಾಣ ಇಲಾಖೆ
- ಶ್ರೀ. ಉದಯ್ ಚಂದನ್, ಕೆ.ಆರ್.ಡಬ್ಲ್ಯೂ.ಎ ಸದಸ್ಯರು
- ಶ್ರೀ. ಪುನೀತ್, ನಾಗರೀಕರು, ಕನಕನಗರ
- ಶ್ರೀಮತಿ. ಗಂಗಾ, ನಾಗರೀಕರು, ಕನಕನಗರ
- ಶ್ರೀಮತಿ, ಮರಿಯಮ್ಮ, ನಾಗರೀಕರು. ಪಟೇಲ್ ಮುನಿಯಪ್ಪ ಲೇಔಟ್
- ಶ್ರೀಮತಿ. ಲಕ್ಷ್ಮಿ, ನಾಗರೀಕರು, ಕನಕನಗರ
- ಶ್ರೀಮತಿ. ಮಂಜುಳ, ನಾಗರೀಕರು, ಕನಕನಗರ
- ಶ್ರೀಮತಿ. ಅಕ್ಕಯಮ್ಮ, ನಾಗರೀಕರು, ಕನಕನಗರ
- ಶ್ರೀಮತಿ. ಮೇರಿ, ನಾಗರೀಕರು, ಕನಕನಗರ
- ಶ್ರೀ. ಯಶ್, ನಾಗರೀಕರು , ಕನಕನಗರ
- ಶ್ರೀ. ಮಹಮ್ಮದ್ ಪ್ಪಾಷ, ನಾಗರೀಕರು

Bruhat Bengaluru
Mahanagara Palike

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ; 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ; 19-03-2022 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ. ಮುನಿರಾಮಣ್ಣ, ವಾರ್ಡ್ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ವಾರ್ಡ್‌ನಲ್ಲಿ ಕೋವಿಡ್ +veಕೇಸ್‌ಗಳು ಹೆಚ್ಚಾಗುವ ಸಾಧ್ಯತೆಗಳಿರುವುದರಿಂದ ಅದಕ್ಕೆ ಸಂಬಂಧಪಟ್ಟಂತೆ ಕೋವಿಡ್ +veಕೇಸ್‌ಗಳನ್ನು ತಡೆಗಟ್ಟುವಂತೆ ಮುಂಜಾಗ್ರತೆ ಕ್ರಮಕೈಗೊಳ್ಳುವಂತೆ ತಿಳಿಸಿದರು.
- ಸುಲ್ತಾನ್‌ಪಾಳ್ಯ ಹಾಗೂ ಕನಕನಗರದ ಮುಖ್ಯರಸ್ತೆಗಳಲ್ಲಿ ಸರಿಯಾಗಿ ವಿದ್ಯುತ್ ಬೀದಿ ದೀಪಗಳು ಬರದೇ ಇರುವುದರಿಂದ ಸಂಬಂಧಪಟ್ಟ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ತಿಳಿಸಿ ಶೀಘ್ರವಾಗಿ ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಉದಯ್ ಚಂದನ್, ಕೆ.ಆರ್.ಡಬ್ಲ್ಯೂ.ಎ ಸದಸ್ಯರು ಮಾತನಾಡುತ್ತಾ, 1ನೇ 'ಎ' ಕ್ರಾಸ್ ಮತ್ತು 9ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ Street light ಹಾಳಾಗಿರುವುದರಿಂದ ಕೂಡಲೇ ಬೆಸ್ಕಾಂ ಇಲಾಖೆಗೆ ತಿಳಿಸಿ ಅದನ್ನು ಸರಿಪಡಿಸುವಂತೆ ತಿಳಿಸಿದರು. ಈಗಾಗಲೇ ಅವುಗಳನ್ನು ಸರಿಪಡಿಸಿರುವುದಾಗಿ ತಿಳಿಸಿದರು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡಿನಲ್ಲಿ ಕೋವಿಡ್ +ve ಕೇಸ್‌ನ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ತಪ್ಪದೇ ಮಾಸ್ಕ್ ಧರಿಸುವುದು ಮತ್ತು ಸ್ಯಾನಿಟೈಸರ್ ಬಳಸುವ ಬಗ್ಗೆ ಮುನ್ನೆಚ್ಚರಿಕೆ ಕ್ರಮವಹಿಸಿರುವುದಾಗಿ ತಿಳಿಸಿದರು. ಅದರಂತೆ 12 ರಿಂದ 14 ವರ್ಷದ ಮಕ್ಕಳಿಗೆ ಈಗಾಗಲೇ 80% ರಿಂದ 90% ನಷ್ಟು ವ್ಯಾಕ್ಸಿನೇಶನ್ ಅನ್ನು ನೀಡಿರುವುದಾಗಿ ತಿಳಿಸಿದರು.
- ವಾರ್ಡಿನ ವ್ಯಾಪ್ತಿಯಲ್ಲಿ ಡೆಂಗ್ಯೂ ಹಾಗೂ ಮಲೇರಿಯಾ ರೋಗ ಹೆಚ್ಚಾಗುತ್ತಿರುವುದರಿಂದ ಅದನ್ನು ತಡೆಗಟ್ಟುವಂತೆ ಸೂಕ್ತ ಕ್ರಮಕೈಗೊಳ್ಳುತ್ತೀರುವ ಬಗ್ಗೆ ತಿಳಿಸಿದರು. ಹಾಗೂ 60 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ ಸರ್ಕಾರಿ ಆಸ್ಪತ್ರೆಯಲ್ಲಿ ಬೂಸ್ಟರ್ ಡೋಸ್‌ಗಳನ್ನು ನೀಡುತ್ತಿರುವುದಾಗಿ ತಿಳಿಸಿದರು. ಅದರಂತೆ 60 ವರ್ಷಕ್ಕಿಂತ ಕೆಳಗಿನವರಿಗೆ ಅಗತ್ಯವಿದ್ದರೆ ಪ್ರೆವೆಟ್ ಆಸ್ಪತ್ರೆಗಳಲ್ಲಿ ಬೂಸ್ಟರ್ ಡೋಸ್ ತೆಗೆದುಕೊಳ್ಳಬಹುದಾಗಿ ತಿಳಿಸಿದರು. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದವರಿಗೆ ಸರ್ಕಾರದಿಂದ ಕೋವಿಡ್ ಪರಿಹಾರ ನಿಧಿಗೆ ಸಾರ್ವಜನಿಕರು ಅರ್ಜಿಗಳನ್ನು ಸಲ್ಲಿಸುವ ಬಗ್ಗೆ ತಿಳಿಸಿದರು ಹಾಗೂ ಅದಕ್ಕೆ ಸಂಬಂಧಪಟ್ಟ ದಾಖಲಾತಿಗಳು ಮತ್ತು ಅದರ ಅನುಕೂಲತೆಗಳ ಬಗ್ಗೆ ಹಾಜರಿದ್ದ ಸದಸ್ಯರಿಗೆ ವಿವರಣೆ ನೀಡಿದರು.
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡಿನಲ್ಲಿ ಕಸದ ನಿರ್ವಹಣೆ ಸರಿಯಾದ ರೀತಿಯಲ್ಲಿ ಮಾಡಿರುತ್ತೀರುವ ಬಗ್ಗೆ ತಿಳಿಸಿದರು.

Bruhat Bengaluru
Mahanagara Palike

- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರು ಮಿಶ್ರಿತ ಜಲ್ಲಿಕಲ್ಲುಗಳಿಂದ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಕೂಡಲೇ ಪ್ರಾರಂಭಿಸುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀಮತಿ ಮರಿಯಮ್ಮ, ನಾಗರೀಕರು ಮಾತನಾಡುತ್ತಾ, ವಿ. ನಾಗೇನಹಳ್ಳಿಯ ಪಟೇಲ್ ಮುನಿಯಪ್ಪ ಲೇಔಟ್‌ನ 2ನೇ ಅಡ್ಡರಸ್ತೆ ಮತ್ತು ಮುಖ್ಯರಸ್ತೆಯಲ್ಲಿ ಅಡ್ಡಮೋರಿಯನ್ನು ಸ್ವಚ್ಛಗೊಳಿಸುವಂತೆ ತಿಳಿಸಿದರು.

- ಕನಕನಗರದ ನಾಗರೀಕರು ಮಾತನಾಡುತ್ತಾ, 7ನೇ 'ಎ' ಕನಕನಗರ ಅಡ್ಡ ರಸ್ತೆಯಲ್ಲಿ ಬೋರ್ ಬೇಲ್ ನೀರು ಸರಿಯಾಗಿ ಬರದೇ ಇರುವುದರಿಂದ ಮತ್ತು ಕಾವೇರಿ ನೀರು ಸಹ ಸರಿಯಾಗಿ ಸರಬರಾಜು ಆಗದೇ ಇರುವುದರಿಂದ ಸಾರ್ವಜನಿಕರಿಗೆ ಬೇಸಿಗೆಯಲ್ಲಿ ತೀರಾ ಸಮಸ್ಯೆ ಉಂಟಾಗುತ್ತಿರುವುದರಿಂದ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ ಶೀಘ್ರವಾಗಿ ನೀರಿನ ಸಮಸ್ಯೆಯನ್ನು ಬಗೆಹರಿಸುವಂತೆ ತಿಳಿಸಿದರು.

- ಶ್ರೀ ಮನೀತು ಕುಮಾರ್ ವಾರ್ಡ್ ನಾಗರೀಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಅಲ್ಲಲ್ಲಿ ಬಿದ್ದಿರುವ ರಸ್ತೆಯ ಗುಂಡಿಗಳನ್ನು ಶೀಘ್ರವಾಗಿ ಮುಚ್ಚುವಂತೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 01;15ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಹಾಗೂ
ಸಹಾಯಕ ಅಭಿಯಂತರರು ವಾರ್ಡ್ ನಂ:22

ನೋಡೆಲ್ ಅಧಿಕಾರಿಗಳು
ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು